ಸರ್ವ ಜನಾಂಗಕ್ಕೂ ಅವರ ಜೀವನವನ್ನು ರೂಪಿಸಿಕೊಳ್ಳಲು ಸಂಪ್ರದಾಯಿಕ ಕಸಬು ಇರುತ್ತದೆ. ಅದರ ಜೊತೆಗೆ ಹೊಸ ಆವಿಷ್ಕಾರಗಳ ಕೌಶಲಗಳನ್ನು ರೂಢಿಸಿಕೊಂಡರೆ ಜೀವನ ಮತ್ತಷ್ಟು ಉತ್ತಮವಾಗಲಿದೆ.
● ರವೀಂದ್ರ, ಜಿಲ್ಲಾಧಿಕಾರಿ

ಸುದ್ದಿ ಸಿಂಚನ

ಶೆಡ್ ಕುಸಿತ: ಸಾವಿರಕ್ಕೂ ಹೆಚ್ಚು ಕೋಳಿಗಳ ಸಾವು

ಚಿಂತಾಮಣಿ: ಕೋಳಿ ಫಾರಂ ಶೆಡ್ ಕುಸಿದ ಕಾರಣ 1000 ಕ್ಕೂ ಹೆಚ್ಚು ಬಾಯ್ಲರ್‌ಕೋಳಿಗಳು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಆದೇಪಲ್ಲಿ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ತಾಲೂಕಿನ ಆದೇಪಲ್ಲಿ ಗ್ರಾಮದ ಬೈರೆಡ್ಡಿಗೆ ಸೇರಿದ ಬಾಯ್ಲರ್‌ಕೋಳಿ ಫಾರಂ ಐದು ಶೆಡ್‌ಗಳಲ್ಲಿ ಸುಮಾರು ಹದಿನೈದು ಸಾವಿರದಷ್ಟು ಕೋಳಿಗಳ ಸಾಕಾಣಿಕೆ ಮಾಡುತ್ತಿದ್ದು ಐದು ಶೆಡ್‌ಗಳ ಪೈಕಿ ಒಂದು ಶೆಡ್‌ನ ಚಾವಣಿ ಏಕಾಏಕಿಯಾಗಿ ಕುಸಿದು ಬಿದ್ದಿದ್ದೆ. ಪರಿಣಾಮ ಶೇಡ್‌ನಲ್ಲಿದ್ದ 3500 ಕೋಳಿಗಳ ಪೈಕಿ 1000 ಕ್ಕೂ ಹೆಚ್ಚು ಕೋಳಿಗಳು ಸತ್ತಿವೆ. ಕುಸಿದು ಬಿದ್ದಿರುವ ಶೆಡ್ ನಿರ್ಮಾಣಕ್ಕೆ 6 ಲಕ್ಷದಷ್ಟು ಖರ್ಚು ಮಾಡಿದ್ದೆ, ಅಷ್ಟೇ ಅಲ್ಲದೆ ಈಗ ಕೋಳಿ ಸಾವನ್ನಪ್ಪಿರುವುದರಿಂದ ನಷ್ಟವಾಗಿದ್ದು ಸರ್ಕಾರ ಪರಿಹಾರ ನೀಡುವಂತೆ ಕೋಳಿ ಫಾರಂ ಮಾಲೀಕ ಬೈರೆಡ್ಡಿ ಮನವಿ ಮಾಡಿದ್ದಾರೆ.

ಸ್ನಾತಕೋತ್ತರ ಪದವಿ ಪ್ರವೇಶಾತಿ ಅವಧಿ ವಿಸ್ತರಣೆ

ಕೋಲಾರ: ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ವ್ಯಾಪ್ತಿಯ ಕಾಲೇಜುಗಳಲ್ಲಿ 2024-25ನೇ ಸಾಲಿನ ಸ್ನಾತಕ ಪದವಿಗಳಿಗೆ ನಿಗದಿಪಡಿಸಿದ್ದ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಲಾಗಿದ್ದು, ಒಂದು ಸಾವಿರ ರು.ಗಳ ದಂಡದೊಂದಿಗೆ ದಾಖಲಾತಿಗೆ ಸೆ.20 ರವರಿಗೂ ಅವಕಾಶ ಕಲ್ಪಿಸಲಾಗಿದೆ ಎಂದು ವಿವಿಯ ಕುಲಸಚಿವರು ತಿಳಿಸಿದ್ದಾರೆ. ಈ ಮೊದಲು ಸ್ನಾತಕ ಪದವಿ ಕೋರ್ಸುಗಳ ಪ್ರವೇಶಾತಿಗೆ ಸೆ.9 ಅಂತಿಮ ದಿನಾಂಕವಾಗಿತ್ತು. ಆದರೆ ವಿದ್ಯಾರ್ಥಿಗಳು, ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಕೋರಿಕೆ ಮೇರೆಗೆ ಹಾಗೂ ಸೆ.17 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯದಂತೆ ಯುಯುಎಂಎಸ್ ಪೋರ್ಟಲ್ ಮುಖಾಂತರ ಈ ಸಾಲಿನ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿಯನ್ನು ಸೆ.20ರವರೆಗೂ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

ನಾಳೆ ಅಂಗನವಾಡಿ ಕಾರ್ಯಕರ್ತೆಯರ ಪ್ರತಿಭಟನೆ

ಚಿಂತಾಮಣಿ: ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅಂಗನವಾಡಿ ಸಂಘಟನೆಗಳ ಸಂಯುಕ್ತ ಸಂಘರ್ಷ ಸಮಿತಿಯು ಸೆ.19ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಿದೆ. ನಿವೃತ್ತ ಅಂಗನವಾಡಿ ಸಿಬ್ಬಂದಿಗೆ ಗ್ಯಾಚುಟಿ ನೀಡಬೇಕು, ಗೌರವಧನ ಹೆಚ್ಚಿಸಬೇಕು, ಗುಣಮಟ್ಟದ ಪೌಷ್ಟಿಕ ಆಹಾರ ನೀಡಬೇಕು, ಅಂಗನವಾಡಿ ಕೇಂದ್ರಗಳಲ್ಲಿಯೇ ಯುಕೆಜಿ, ಎಲ್‌ಕೆಜಿ ಪ್ರಾರಂಭಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುವುದಾಗಿ ಸಂಘಟನೆಯ ಚಿಕ್ಕಬಳ್ಳಾಪುರ ಜಿಲ್ಲಾ ಸಮಿತಿಯ ಅಧ್ಯಕ್ಷ ಎನ್.ಸುಂದರ್‌ರಾಜ್ ತಿಳಿಸಿದ್ದಾರೆ.

ವಿಶ್ವದ ಶ್ರೇಷ್ಠ ನಾಯಕ ಪ್ರಧಾನಿ ನರೇಂದ್ರ ಮೋದಿ

ಮಾಲೂರು: ವಿಶ್ವ ಕಂಡ ಶ್ರೇಷ್ಠ ಪ್ರಧಾನ ಮಂತ್ರಿಗಳಲ್ಲಿ ಒಬ್ಬರಾದ ನರೇಂದ್ರ ಮೋದಿಯವರು ಬಡವ, ದೀನ, ದಲಿತರು, ಹಿಂದುಳಿದ ವರ್ಗದವರ ಅಭಿವೃದ್ಧಿಗಾಗಿ ಹಲವಾರು ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸಿ ಸಾಮಾಜಿಕ ನ್ಯಾಯವನ್ನು ಒದಗಿಸಿದ್ದಾರೆ ಎಂದು ತಾಲೂಕು ಗಾಣಿಗರ ಸಂಘದ ಅಧ್ಯಕ್ಷ ಎಸ್.ಎಂ ರಮೇಶ್ ಹೇಳಿದರು. ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ 74ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ತಾಲ್ಲೂಕು ಗಾಣಿಗರ ಸಂಘದ ವತಿಯಿಂದ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಡಾ. ವಸಂತ್, ತಾಲೂಕು ಗಾಣಿಗರ ಸಂಘದ ಪ್ರಧಾನ ಕಾರ್ಯದರ್ಶಿ ಸುರೇಶ್, ಮತ್ತಿತರರು ಇದ್ದರು.

ಚಿಕ್ಕಬಳ್ಳಾಪುರ ನಗರಸಭೆ ಅಧಿಕಾರ ಬಿಜೆಪಿ ವಶಕ್ಕೆ

ಸಂಸದ ಡಾ.ಸುಧಾಕರ್ ಬೆಂಬಲಿತ ಗಜೇಂದ್ರ ಅಧ್ಯಕ್ಷರಾಗಿ, ಗ್ಯಾಸ್ ನಾಗರಾಜು ಉಪಾಧ್ಯಕ್ಷರಾಗಿ ಆಯ್ಕೆ | ಕಾಂಗ್ರೆಸ್‌ಗೆ ಮುಖಭಂಗ

● **ಕನ್ನಡಪ್ರಭ ವಾರ್ತೆ** ಚಿಕ್ಕಬಳ್ಳಾಪುರ

ಇಲ್ಲಿಯ ನಗರಸಭೆಯ ನೂತನ ಅಧ್ಯಕ್ಷರಾಗಿ ಸಂಸದ ಡಾ.ಕೆ.ಸುಧಾಕರ್‌ಬೆಂಬಲಿಗರಾದ ಬಿಜೆಪಿ ಸದಸ್ಯ ಗಜೇಂದ್ರ ಹಾಗೂ ಉಪಾಧ್ಯಕ್ಷರಾಗಿ ಗ್ಯಾಸ್ ನಾಗರಾಜು ಆಯ್ಕೆಯಾಗಿದ್ದಾರೆ. ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷಸ್ಥಾನಕ್ಕೆ ಇತ್ತೀಚೆಗೆ ನಡೆದ ಚುನಾವಣೆಯ ಫಲಿತಾಂಶವನ್ನು ಪ್ರಕಟಿಸಲು ಮಂಗಳವಾರ ಹೈಕೋರ್ಟ್ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಯೂ ಆದ ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್ ಫಲಿತಾಂಶ ಪ್ರಕಟಿಸಿದರು.

ಚಿಕ್ಕಬಳ್ಳಾಪುರ ನಗರಸಭೆಯ ನೂತನ ಅಧ್ಯಕ್ಷ -ಉಪಾಧ್ಯಕ್ಷರ ಪದಗ್ರಹಣ ಸಮಾರಂಭದಲ್ಲಿ ಸಂಸದ ಡಾ.ಕೆ.ಸುಧಾಕರ್ ಮತ್ತು ನಗರಸಭಾ ಸದಸ್ಯರು ಪಾಲ್ಗೊಂಡಿದ್ದರು.

ಅಧ್ಯಕ್ಷ, ಉಪಾಧ್ಯಕ್ಷರ ಪದಗ್ರಹಣ: ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಬಿಜೆಪಿಯ ಗಜೇಂದ್ರ 19 ಮತಗಳನ್ನು ಹಾಗೂ ಉಪಾಧ್ಯಕ್ಷ ಸ್ಥಾನ ಕ್ಕೆ ಸ್ಪರ್ಧಿಸಿದ್ದ ಗ್ಯಾಸ್ ನಾಗರಾಜು 20ಮತಗಳನ್ನು ಗಳಿಸಿ ಜಯಶೀಲರಾಗಿದ್ದಾರೆ. ಕಾಂಗ್ರೆಸ್‌ನಿಂದ ಅಧ್ಯಕ್ಷಸ್ಥಾನಕ್ಕೆ ಸ್ಪರ್ಧಿಸಿದ್ದ ಅಂಬರೀಶ್ 16 ಮತಗಳನ್ನು ಮತ್ತು ಉಪಾಧ್ಯಕ್ಷ ಸ್ಥಾನ ಕ್ಕೆ ಸ್ಪರ್ಧಿಸಿದ್ದ ಮೀನಾಕ್ಷಿ ಮಿಲ್ಟನ್ ವೆಂಕಟೇಶ್ 15 ಮತಗಳನ್ನು ಪಡೆದು ಪರಾಭವಗೊಂಡಿದ್ದಾರೆ. ಇದೇ ಸಂದರ್ಭದಲ್ಲಿ ಸಂಸದ ಡಾ.ಕೆ. ಸುಧಾಕರ್ ನೇತೃತ್ವದಲ್ಲಿ ನಗರಸಭೆ ನೂತನ ಅಧ್ಯಕ್ಷ -ಉಪಾಧ್ಯಕ್ಷರು ಪದಗ್ರಹಣ ಮಾಡಿದರು.

ಶಾಸಕ ಪ್ರದೀಪ್ ಈಶ್ವರ್‌ಹಾಗೂ ಸಂಸದ ಡಾ ಕೆ. ಸುಧಾಕರ್‌ಮಧ್ಯೆ ಭಾರೀ ಪ್ರತಿಷ್ಠೆಗೆ ಕಾರಣವಾಗಿ, ಸಿನಿಮೀಯ ಶೈಲಿಯಲ್ಲಿ ನಡೆದ ಚಿಕ್ಕಬಳ್ಳಾಪುರ ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ ಕಳೆದ ಗುರುವಾರ ನಡೆದಿತ್ತು. ಆದರೆ ಚುನಾವಣೆಯಲ್ಲಿ ಎಂಎಲ್ಸಿಗಳಾದ ಅನಿಲ್‌ಕುಮಾರ್ ಹಾಗೂ ಎ.ಆರ್.ಸೀತಾರಾಂ ಮತದಾನ ಮಾಡಿದ್ದನ್ನು ವಿರೋಧಿಸಿ ನಗರಸಭಾ ಮಾಜಿ ಸದಸ್ಯ ಆನಂದಬಾಬುರೆಡ್ಡಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು.

ಫಲಿತಾಂಶ ಪ್ರಕಟಿಸಿರಲಿಲ್ಲ: ಆಗ ಚುನಾವಣೆ ನಡೆಸಲು ಹೈಕೋರ್ಟ್ ಸೂಚನೆ ನೀಡಿತಾದರೂ, ಫಲಿತಾಂಶ ರಿಟ್ ಅರ್ಜಿಯ ತೀರ್ಪಿಗೆ ಫಲಿತಾಂಶಕ್ಕೆ ಒಳಪಟ್ಟಿರುತ್ತದೆ ಎಂದು ಆದೇಶಿಸಿತ್ತು. ಹಾಗಾಗಿ ಅಂದು ಚುನಾವಣೆ ನಡೆದರೂ ಅಧಿಕೃತವಾಗಿ ಫಲಿತಾಂಶ ಪ್ರಕಟಿಸಿರಲಿಲ್ಲ. ಕಳೆದ ಗುರುವಾರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ 16 ಮಂದಿ ಸದಸ್ಯರು, ಬಿಜೆಪಿ 09 ಮಂದಿ ಹಾಗೂ ಜೆಡಿಎಸ್‌ನ ಇಬ್ಬರು ಸೇರಿದಂತೆ 4 ಮಂದಿ ಪಕ್ಷೇತರರು, ಸಂಸದ ಡಾ ಕೆ. ಸುಧಾಕರ್, ಶಾಸಕ ಪ್ರದೀಪ್ ಈಶ್ವರ್, ವಿಧಾನ ಪರಿಷತ್ ಸದಸ್ಯರಾದ ಅನಿಲ್ ಕುಮಾರ್‌ಹಾಗೂ ಎಂ.ಆರ್.ಸೀತಾರಾಂ ಮತದಾನ ಮಾಡಿದ್ದರು.

ರಿಟ್ ಹಿಂಪಡೆದ ಅರ್ಜಿದಾರ: ಚುನಾವಣೆಯ ನಂತರ ನ್ಯಾಯಾಲಯದಲ್ಲಿ ರಿಟ್ ಅರ್ಜಿಯನ್ನು ಅರ್ಜಿದಾರರು ವಾಪಸ್ಸು ಪಡೆದ ಹಿನ್ನಲೆ ನ್ಯಾಯಾಲಯವು ತಡೆ ಹಿಡಿದಿದ್ದ ಚುನಾವಣಾ ಫಲಿತಾಂಶ ಪ್ರಕಟಿಸುವಂತೆ ಚುನಾವಣಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್ ರಿಗೆ ಆದೇಶ ನೀಡಿದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿ ಡಿ.ಹೆಚ್. ಅಶ್ವಿನ್ ಮಂಗಳವಾರ ನಗರಸಭಾ ಸದಸ್ಯರ ಸಭೆ ಕರೆದು ಚುನಾವಣಾ ಫಲಿತಾಂಶ ಪ್ರಕಟಿಸಿದರು.

ಬೆಂಗಳೂರಿಗೆ ಪರ್ಯಾಯ ಚಿಕ್ಕಬಳ್ಳಾಪುರ: ಈ ವೇಳೆ ಮಾತನಾಡಿದ ಸಂಸದ ಡಾ.ಕೆ.ಸುಧಾಕರ್, ಕಾಂಗ್ರೆಸ್ ಸರ್ಕಾರದ ಅಧಿಕಾರ ದುರುಪಯೋಗ, ಆಮಿಷ, ಬೆದರಿಕೆ ಇವೆಲ್ಲದರ ನಡುವೆಯೂ ಚಿಕ್ಕಬಳ್ಳಾಪುರ ನಗರಸಭೆಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದು, ಈ ಐತಿಹಾಸಿಕ ಗೆಲುವಿಗೆ ಕಾರಣೀಭೂತರಾದ ಎಲ್ಲ ನಾಯಕರಿಗೂ ನನ್ನ ಅಭಿನಂದನೆ ತಿಳಿಸುತ್ತೇನೆ. ಚಿಕ್ಕಬಳ್ಳಾಪುರ ಸುರಕ್ಷಿತ ಹಾಗೂ ಸುಸಜ್ಜಿತ ನಗರವಾಗಿ ಮತ್ತು ಬೆಂಗಳೂರಿಗೆ ಪರ್ಯಾಯವಾಗಿ ಬೆಳೆಯಬೇಕು ಎಂದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆಯಡಿ 40 ಕೋಟಿ ರೂಗಳ ಅನುದಾನ ತಂದಿದ್ದರೂ, ಕಾಂಗ್ರೆಸ್ ಸರ್ಕಾರ ಟೆಂಡರ್‌ಹಂತದಲ್ಲಿ ರದ್ದು ಮಾಡಿ ರಾಜಕೀಯ ಮಾಡಿತ್ತು. ಕಳೆದ 16 ತಿಂಗಳಿಂದ ಚಿಕ್ಕಬಳ್ಳಾಪುರ ನಗರ ಅಭಿವೃದ್ಧಿ ಶೂನ್ಯವಾಗಿತ್ತು. ಇನ್ನು ಮುಂದೆ ಉತ್ತಮವಾಗಿ ಅಭಿವೃದ್ಧಿ ಹೊಂದಲಿದೆ ಎಂದು ವಿಶ್ವಾಸವನ್ನು ವ್ಯಕ್ತಪಡಿಸಿದರು.

ನಗರದ ಅಭಿವೃದ್ಧಿಗೆ ಆದ್ಯತೆ: ನೂತನ ಅಧ್ಯಕ್ಷ ಗಜೇಂದ್ರ ಮತ್ತು ಉಪಾಧ್ಯಕ್ಷ ಗ್ಯಾಸ್ ನಾಗರಾಜು ಮಾತನಾಡಿ, ಸಂಸದ ಡಾ.ಕೆ.ಸುಧಾಕರ್ ಅವರ ಬೆಂಬಲದಿಂದಾಗಿ ಚಿಕ್ಕಬಳ್ಳಾಪುರ ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆಯಲ್ಲಿ ಬಿಜೆಪಿಗೆ ಎರಡೂ ಸ್ಥಾನಗಳು ದೊರೆತಿವೆ. ಇನ್ನು ಮುಂದೆ ನಗರದ ಅಭಿವೃದ್ಧಿಗೆ ಶ್ರಮಿಸುತ್ತೇವೆ ಎಂದರು.

ಚುನಾವಣೆಯ ನಂತರ ಬೆಂಬಲಿಗರು, ಮುಖಂಡರು ಕಾರ್ಯಕರ್ತರು ತೆರೆದ ವಾಹನದಲ್ಲಿ ಮೆರವಣಿಗೆ ನಡೆಸಿ, ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ವಿಶ್ವಕರ್ಮ ಜನಾಂಗ ಶಿಕ್ಷಣಕ್ಕೆ ಒತ್ತು ನೀಡಲಿ

ವಿಶ್ವಕರ್ಮ ಜಯಂತಿಯಲ್ಲಿ ಜಿಲ್ಲಾಧಿಕಾರಿ ರವೀಂದ್ರ ಸಲಹೆ | ಸಮುದಾಯ ಭವನಕ್ಕೆ ಜಮೀನು

● **ಕನ್ನಡಪ್ರಭ ವಾರ್ತೆ** ಚಿಕ್ಕಬಳ್ಳಾಪುರ

ಸರ್ವ ಜನಾಂಗಕ್ಕೂ ಅವರ ಜೀವನವನ್ನು ರೂಪಿಸಿಕೊಳ್ಳಲು ಸಂಪ್ರದಾಯಿಕ ಕಸಬು ಇರುತ್ತದೆ. ಅದರ ಜೊತೆಗೆ ಹೊಸ ಆವಿಷ್ಕಾರಗಳ ಕೌಶಲಗಳನ್ನು ರೂಢಿಸಿಕೊಂಡರೆ ಜೀವನ ಮತ್ತಷ್ಟು ಉತ್ತಮವಾಗಲಿದೆ ಎಂದು ಜಿಲ್ಲಾಧಿಕಾರಿ ಪಿ. ಎನ್. ರವೀಂದ್ರ ತಿಳಿಸಿದರು.

ನಗರ ಹೊರವಲಯದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ''ವಿಶ್ವಕರ್ಮ ಜಯಂತಿ'' ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಚಿಕ್ಕಬಳ್ಳಾಪುರದಲ್ಲಿ ನಡೆದ ವಿಶ್ವಕರ್ಮ ಜಯಂತಿಯಲ್ಲಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾತನಾಡಿದರು.

ಸಮುದಾಯ ಭವನಕ್ಕೆ ಜಾಗ

ಈ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಶಿಕ್ಷಣವನ್ನೇ ಶಕ್ತಿಯನ್ನಾಗಿಸಿಕೊಂಡು ತಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಸಮುದಾಯದ ಅಭಿವೃದ್ಧಿಗೆ ಸೂಲಿಕುಂಟೆಯ ಬಳಿ 7 ಎಕರೆಯ ಭೂಮಿ ಮಂಜೂರು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ವಿಶ್ವಕರ್ಮ ಸಂಘದ ಅಧ್ಯಕ್ಷ ಸಿ.ಬಿ.ನವೀನ್‌ಕುಮಾರ್ ಮಾತನಾಡಿ, ಬ್ರಹ್ಮ ಇಡಿ ಬ್ರಹ್ಮಾಂಡವನ್ನೇ ಸೃಷ್ಟಿಸಿದನು ಎಂಬುದನ್ನು ಹಿಂದೂ ಧರ್ಮದ ಗ್ರಂಥಗಳು ಹೇಳುತ್ತವೆ. ಆದೇ ರೀತಿ ಈ ಬ್ರಹ್ಮಾಂಡವನ್ನ ಒಂದು ರೂಪಕ್ಕೆ ಇಳಿಸಿದ್ದು ವಿಶ್ವಕರ್ಮ ಎಂದು ನಂಬಲಾಗಿದೆ ಎಂದು ಅವರು ತಿಳಿಸಿದರು.

ಪ್ರಾಂಶುಪಾಲ ಬಿ.ವಿ ಪ್ರಕಾಶ್ ಉಪನ್ಯಾಸ ನೀಡಿದರು.

ಈ ವೇಳೆಯಲ್ಲಿ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು ಹಾಗೂ ಸಮುದಾಯದ ಹಿರಿಯ ಮುಖಂಡರಾದ ಗೋವಿಂದ ಚಾರಿ, ಶ್ರೀನಿವಾಸ ಚಾರಿ, ಚಂದ್ರ ಶೇಖರ್, ಯತೀಶ್ ರವರಿಗೆ ಸನ್ಮಾನಿಸಲಾಯಿತು.

ಈ ವೇಳೆ ವಿವಿಧ ಇಲಾಖೆಗಳ ಅಧಿಕಾರಿಗಳು, ನಗರಸಭಾ ಸದಸ್ಯರು, ಸಮುದಾಯದ ಮುಖಂಡರು ಇದ್ದರು.

ಉತ್ತರ ವಿವಿ ಉತ್ತರೋತ್ತರ ಪ್ರಶಸ್ತಿಗೆ ಮೂವರ ಆಯ್ಕೆ

ಬೆಂಗಳೂರು ಉತ್ತರ ವಿವಿ ವಾರ್ಷಿಕ ಉತ್ತರೋತ್ತರ ಪ್ರಶಸ್ತಿಗೆ ನಾಟಕಕಾರ ಕೋಟಿಗಾನಹಳ್ಳಿ ರಾಮಯ್ಯ, ರತ್ನಮ್ಮ ಹಾಗೂ ಅಕ್ಕೈ ಪದ್ಮಶಾಲಿ ಭಾಜನರಾಗಿದ್ದಾರೆ.

ಕೋಲಾರ: ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಾರ್ಷಿಕ ಉತ್ತರೋತ್ತರ ಪ್ರಶಸ್ತಿಗೆ ಈ ಬಾರಿ ಮೂವರು ಸಾಧಕರು ಆಯ್ಕೆಯಾಗಿದ್ದಾರೆ ಎಂದು ವಿವಿಯ ಕುಲಪತಿ ಪ್ರೊ.ನಿರಂಜನವಾನಳ್ಳಿ ತಿಳಿಸಿದ್ದಾರೆ. ಈ ಪ್ರಶಸ್ತಿಗೆ ಕೋಲಾರದ ಕವಿ, ನಾಟಕಕಾರ ಕೋಟಿಗಾನಹಳ್ಳಿ ರಾಮಯ್ಯ, ಶ್ರೀನಿವಾಸಪುರ ತಾಲ್ಲೂಕಿನ ಸಿರಿಧಾನ್ಯ ಸಂರಕ್ಷಣಾ ಮಹಿಳೆ ರತ್ನಮ್ಮ ಹಾಗೂ ತೃತೀಯ ಲಿಂಗ ಸಾಮಾಜಿಕ ಹೋರಾಟಗಾರ್ತಿ ಅಕ್ಕೈ ಪದ್ಮಶಾಲಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಸೆ.20 ರ ಬೆಳಗ್ಗೆ 11.30 ಗಂಟೆಗೆ ನಗರ ಹೊರವಲಯದ ಮಂಗಸಂದ್ರದ ಸ್ನಾತಕೋತ್ತರ ಕೇಂದ್ರದಲ್ಲಿ ಈ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಶಾಸಕ ಮುನಿರತ್ನ ಗಡಿಪಾರು ಮಾಡಲು ಆಗ್ರಹ

ಶಾಸಕ ನಾರಾಯಣಸ್ವಾಮಿ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಪ್ರತಿಭಟನೆ | ದೂರು ದಾಖಲು

● **ಕನ್ನಡಪ್ರಭ ವಾರ್ತೆ** ಬಂಗಾರಪೇಟೆ

ದಲಿತರ ಹಾಗೂ ಒಕ್ಕಲಿಗರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಶಾಸಕ ಮುನಿರತ್ನ ರವರನ್ನು ಶಾಸಕ ಸ್ಥಾನದಿಂದ ವಜಾಗೊಳಿಸಿ ಗಡಿಪಾರು ಮಾಡಬೇಕೆಂದು ಆಗ್ರಹಿಸಿ ಪಟ್ಟಣದಲ್ಲಿ ಶಾಸಕ ಎಸ್.ಎನ್.ನಾರಾಯಣಸ್ವಾಮಿ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಹಿಂದೆ ಫುಟ್‌ಪಾತ್‌ನಲ್ಲಿ ಇಡ್ಲಿ ಮಾರುತ್ತಿದ್ದ ಮುನಿರತ್ನ ರವರು ಸಾವಿರಾರು ಕೋಟಿ ರೂಗಳ ಒಡೆಯನಾಗಿರುವುದು ಹೇಗೆ, ಬಿಬಿಎಂಪಿ ಸದಸ್ಯರಾಗಿದ್ದಾಗ 1200 ಕೋಟಿ ರು.ಗಳ ಅಕ್ರಮ ವ್ಯವಹಾರ ಮಾಡಿ ಅದರ ದಾಖಲೆಗಳನ್ನು ಸುಟ್ಟು ಹಾಕಿದ್ದರು ಎಂದು ಶಾಸಕ ನಾರಾಯಣಸ್ವಾಮಿ ಆರೋಪಿಸಿದರು.

ಬಂಗಾರಪೇಟೆ ಪಟ್ಟಣದಲ್ಲಿ ಶಾಸಕ ಮುನಿರತ್ನ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಬಿಜೆಪಿ ವಿರುದ್ಧ ಟೀಕೆ: ಸಚಿವರಾಗಿದ್ದಾಗ ಸಾವಿರಾರು ಕೋಟಿ ಹಗರಣ ಮಾಡಿದ್ದಾರೆ, ಇಂತಹ ವಂಚನೆಕೋರ ಬೆವರು ಸುರಿಸಿ ದುಡಿಯುವ ಶ್ರಮಿಕರ ಬಳಿ ಲಂಚ ಕೇಳುವುದು ಸರಿಯೇ ಎಂದು ಪ್ರಶ್ನಿಸಿದ ಅವರು. ದಲಿತರ ಹಾಗೂ ಒಕ್ಕಲಿಗರ ಬಗ್ಗೆ ಕೀಳಾಗಿ ಮಾತನಾಡುವ ಮುನಿರತ್ನ ರವರ ಬಗ್ಗೆ ಕ್ರಮವಹಿಸದೆ ಅವರ ಪರನಿಲ್ಲುವ ಬಿ